ಮಂಗಳೂರು ಸಮುದ್ರತೀರ ಪ್ರದೇಶದ ಸುಲ್ತಾನ್ ಬತ್ತೇರಿ ಮತ್ತು ತಣ್ಣೀರ್ ಭಾವಿಯನ್ನು ಸಂಪರ್ಕಿಸುವ ಸೇತುವೆಯೊಂದರ ಪ್ರಸ್ತಾವನೆ

103 - ಶ್ರೀ ಬ್ಲೇಸಿಯಸ್ ಎಂ. ಡಿಸೋಜ (ಮಂಗಳೂರು) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಪ್ರವಾಸಿಗರ ಅನುಕೂಲ ದೃಷ್ಟಿಯಿಂದ ಮಂಗಳೂರು ಸಮುದ್ರತೀರ ಪ್ರದೇಶದ ಸುಲ್ತಾನ್ ಬತ್ತೇರಿ ಮತ್ತು ತಣ್ಣೀರ್ ಬಾವಿಯನ್ನು ಸಂಪರ್ಕಿಸುವ ಸೇತುವೆಯೊಂದನ್ನು ರಚಿಸುವ ಪ್ರಸ್ತಾವನೆ ಸರ್ಕಾರದ ಅರಿವಿಗೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಸರ್ಕಾರವು ಸದರಿ ಸೇತುವೆಯನ್ನು ಕಟ್ಟುವ ಬಗ್ಗೆ ಕೈಗೊಂಡ ಕ್ರಮವೇನು?*

ಶ್ರೀ ಎಸ್. ಬಂಗಾರಪ್ಪ (ಮುಖ್ಯ ಮಂತ್ರಿಗಳು) :

ಅ) ಹೌದು.

ಆ) ಸದರಿ ಸೇತುವೆಯ ಒಂದು ಭಾಗವು ಮಂಗಳೂರು ನಗರಕ್ಕೆ ಹೊಂದಿಕೊಂಡಿದ್ದು, ಇದು ಮಂಗಳೂರು ನಗರ ಕಾರ್ಪೋರೇಷನ್ ವ್ಯಾಪ್ತಿಗೆ ಬರುತ್ತದೆ. ಹಾಗೂ ಸೇತುವೆಯ ಇನ್ನೊಂದು ಭಾಗವು ಜಿಲ್ಲಾಪರಿಷತ್ತಿನ ವ್ಯಾಪ್ತಿಗೆ ಬರುತ್ತದೆ. ರಸ್ತೆಯ ಪ್ರಾಮುಖ್ಯತೆಯನ್ನು ಪರೀಕ್ಷಿಸಿ ಕೇಂದ್ರ ಸರ್ಕಾರದ ರಸ್ತೆ ನಿಧಿ ಯೋಜನೆಯು ಕಾಮಗಾರಿಯನ್ನು ಸೇರಿಸುವ ಬಗ್ಗೆ ಪರಿಶೀಲಿಸಲಾಗುವುದು.

ರಾಜ್ಯದಲ್ಲಿರುವ ಸಣ್ಣ ಪ್ರಮಾಣದ ಕೈಗಾರಿಕೆಗಳ ಸಂಖ್ಯೆ

102 - ಶ್ರೀ ಬ್ಲೇಸಿಯಸ್ ಎಂ. ಡಿಸೋಜ (ಮಂಗಳೂರು) : ಮಾನ್ಯ ಸಣ್ಣ ಪ್ರಮಾಣದ ಕೈಗಾರಿಕಾ ರಾಜ್ಯ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕರ್ನಾಟಕ ರಾಜ್ಯದಲ್ಲಿ ಒಟ್ಟು ಎಷ್ಟು ಸಣ್ಣ ಪ್ರಮಾಣದ ಕೈಗಾರಿಕೆಗಳಿವೆ. ಜಿಲ್ಲಾವಾರು ವಿವರಗಳನ್ನು ಒದಗಿಸುವುದು.*

ಆ) *ಕರ್ನಾಟಕ ರಾಜ್ಯದಲ್ಲಿ ಒಟ್ಟು ಎಷ್ಟು ರೋಗಗ್ರಸ್ಥ ಕೈಗಾರಿಕೆಗಳಿವೆ. ಜಿಲ್ಲಾವಾರು ವಿವರಗಳನ್ನು ಒದಗಿಸುವುದು.*

ಇ) *ಈ ರೋಗಗ್ರಸ್ಥ ಸಣ್ಣ ಪ್ರಮಾಣದ ಕೈಗಾರಿಕೆಗಳನ್ನು ಪುನಶ್ಚೇತನಗೊಳಿಸಲು ರಾಜ್ಯ ಸರ್ಕಾರವು ಯಾವ ರೀತಿ ಕಾರ್ಯಕ್ರಮ ಕೈಗೊಂಡಿದೆ?*

ಶ್ರೀ ನಸೀರ್ ಅಹಮದ್ (ಸಣ್ಣ ಪ್ರಮಾಣದ ಕೈಗಾರಿಕಾ ರಾಜ್ಯ ಸಚಿವರು):

ಅ) 1,05,567 ಜಿಲ್ಲಾವಾರು ವಿವರಗಳನ್ನು ಲಗತ್ತಿಸಿದೆ.

ಆ) 1,621 ಜಿಲ್ಲಾವಾರು ವಿವರಗಳನ್ನು ಲಗತ್ತಿಸಿದೆ.

ಇ) ರೋಗಗ್ರಸ್ಥ ಸಣ್ಣ ಪ್ರಮಾಣದ ಕೈಗಾರಿಕೆಗಳನ್ನು ಪುನಃಶ್ಚೇತನಗೊಳಿಸಲು ಸರ್ಕಾರವು ಕೆಳಕಂಡ ಕ್ರಮಗಳನ್ನು ಕೈಗೊಂಡಿದೆ.

1) ರೋಗಗ್ರಸ್ಥ ಘಟಕಗಳ ಸಮಸ್ಯೆಗಳು ಪರಿಶೀಲಿಸಲು ಅಂತರ ರಾಜ್ಯ ಹಣಕಾಸು ಸಂಸ್ಥೆಗಳ ಸಮಿತಿಯನ್ನು ರಚಿಸಲಾಗಿದೆ?

2) ಪುನಃಶ್ಚೇತನಗೊಳಿಸಲು ಸಾಧ್ಯವಿರುವ ಘಟಕಗಳಿಗೆ ಬೀಜಧನ ಸಾಲವನ್ನು ಮಂಜೂರು ಮಾಡಿದೆ. ರಾಜ್ಯ ಮಟ್ಟದ ಪುನಃಶ್ಚೇತನ ಸಮಿತಿಯನ್ನು ರಚಿಸಲಾಗಿದೆ.